ಮಾನ್ಯ ವಿಧಾನ ಪರಿಷತ್ ಸದಸ್ಯರಾದ ಶ್ರೀ ಕೆ.ಪ್ರತಾಪ್‌ಸಿಂಹ ನಾಯಕ್ ರವರು ಮಂಡಿಸಿರುವ ಶೂನ್ಯವೇಳೆ ಪ್ರಶ್ನೆಗೆ ಉತ್ತರ

ಪ್ರಶ್ನೆ: ರಾಜ್ಯದಲ್ಲಿ ಡೆಡ್ಲಿ ಆನ್‌ಲೈನ್ ಗೇಮ್‌ಗೆ ಯುವಜನರು ಪ್ರತಿನಿತ್ಯ ಆಹುತಿಯಾಗುತ್ತಿದ್ದಾರೆ. ಕಳೆದ 4–5 ತಿಂಗಳಲ್ಲಿ ರಾಜ್ಯದಲ್ಲಿ 16ಕ್ಕೂ ಹೆಚ್ಚು ಜನ ಆನ್‌ಲೈನ್ ಗೇಮ್/ಬೆಟ್ಟಿಂಗ್‌ಗೆ ಬಲಿಯಾಗಿದ್ದಾರೆ ಎಂದು ವರದಿಯಾಗಿದೆ. ಆದರೆ ಇವು ಕೇವಲ ವರದಿಯಾದ ಪ್ರಕರಣಗಳ ಸಂಖ್ಯೆ ಮಾತ್ರ. ಸಮಾಜದ ಭೀತಿಯಿಂದ ಹಲವಾರು ಪ್ರಕರಣಗಳು ಬಯಲಾಗದೇ ಹಾಗೇ ಉಳಿದಿವೆ. ಲಕ್ಷಗಟ್ಟಲೇ ಸಾಲ ಮಾಡಿ ಹಣ ಕಳೆದುಕೊಂಡ ಹಲವಾರು ವಿದ್ಯಾರ್ಥಿಗಳು ಕೂಡ ಆತ್ಮಹತ್ಯೆಗೆ ಶರಣಾಗಿದ್ದಾರೆ.

ಆನ್‌ಲೈನ್ ಗೇಮಿಂಗ್ ಅನ್ನೋದು ಕೆಲವರಿಗೆ ಮನರಂಜನೆಯಾದರೆ, ಮತ್ತೆ ಕೆಲವರಿಗೆ ಜೂಜು–ಮೋಜು ಆದರೆ ಬಹುತೇಕರಿಗೆ ಅದು ಪ್ರಾಣಕ್ಕೆ ಕುತ್ತು ತರುವ ಮೃತ್ಯು ಪಾಶ! "ಆಟ"ದ ಹೆಸರಿನಲ್ಲಿ ಆರಂಭವಾಗುವ ಹವ್ಯಾಸವು ನಂತರದಲ್ಲಿ ವ್ಯಸನವಾಗಿ ಬೆಳೆದು, ಕೊನೆಗೆ ಜೀವನವನ್ನೇ ಕಸಿದುಕೊಳ್ಳುತ್ತಿರುವ ಮಟ್ಟಕ್ಕೆ ತಲುಪುತ್ತಿದೆ. ಆಘಾತಕಾರಿ ಅಂಶವೆಂದರೆ ಈ ರೀತಿ ಆತ್ಮಹತ್ಯೆಯ ದಾರಿ ಹಿಡಿಯುತ್ತಿರುವ ಬಹುತೇಕರೆಲ್ಲರೂ ಸರಿಸುಮಾರು 20 ರಿಂದ 35ರ ವಯೋಮಾನದವರು.

ಹಣ ಕಳೆದುಕೊಳ್ಳುತ್ತಿರುವವರಲ್ಲಿ ಬಹುತೇಕರು ಸಾಲದ ಸುಳಿಗೆ ಸಿಲುಕಿರುತ್ತಾರೆ. ಈ ವಿಚಾರವನ್ನು ಸ್ನೇಹಿತರು, ಕುಟುಂಬದ ಸದಸ್ಯರ ಬಳಿಯೂ ಹೇಳಿಕೊಳ್ಳಲಾಗದೆ ಮಾನಸಿಕ ಒತ್ತಡಕ್ಕೆ ಸಿಲುಕಿ ಆತ್ಮಹತ್ಯೆ ಮಾಡಿಕೊಳ್ಳುತ್ತಿದ್ದಾರೆ. ಒಂದೆರಡು ಕಡೆ ಮರ್ಯಾದೆಗೆ ಮಾನಸಿಕ ಒತ್ತಡಕ್ಕೆ ಸಿಲುಕಿ ಆತ್ಮಹತ್ಯೆ ಮಾಡಿಕೊಳ್ಳುತ್ತಿದ್ದಾರೆ. ಒಂದೆರಡು ಕಡೆ ಮರ್ಯಾದೆಗೆ ಅಂಜಿ ಇಡೀ ಕುಟುಂಬವೇ ಆತ್ಮಹತ್ಯೆಗೆ ಶರಣಾಗಿರುವಂಥ ಹೃದಯ ವಿದ್ರಾವಕ ಪ್ರಕರಣಗಳೂ ನಡೆದಿವೆ. ಜೊತೆಗೆ ವಿದ್ಯಾರ್ಥಿಗಳು ಈ ಖೆಡ್ಡಾದೊಳಗೆ ಸಿಲುಕುತ್ತಿರುವುದು ಅತ್ಯಂತ ಆತಂಕಕ್ಕೆ ಎಡೆಮಾಡಿದೆ. ಕೆಲವರು ಶಿಕ್ಷಣವನ್ನು ಅರ್ಧದಲ್ಲೆ ಮೊಟಕುಗೊಳಿಸಿದ್ದರೆ ಮತ್ತೆ ಕೆಲವರು ಓದುವಾಗಲೇ ಈ ಚಟಕ್ಕೆ ಬಿದ್ದು ಸರ್ವನಾಶದ ದಾರಿ ಹಿಡಿದಿದ್ದಾರೆ.

ದೇಶ ನಿರ್ಮಾಣಕ್ಕೆ ಪಣ ತೊಡಬೇಕಾಗಿರುವ ಯುವಜನತೆಗೆ ಮೃತ್ಯುಪಾಶವಾಗಿ ಪರಿಣಮಿಸಿ, ಅವರನ್ನು ಮಾನಸಿಕ ಖಿನ್ನತೆಗೆ ದೂಡಿ, ಆತ್ಮಹತ್ಯೆಗೆ ಪ್ರಚೋದಿಸುತ್ತಿರುವುದರ ಜೊತೆಗೆ ಕುಟುಂಬ ವ್ಯವಸ್ಥೆ ನೈತಿಕ ಮೌಲ್ಯಗಳು, ಸಾಮಾಜಿಕ ಸ್ವಾಸ್ಥ್ಯಕ್ಕೆ ಅತ್ಯಂತ ಮಾರಕ ಮತ್ತು ಕಂಟಕವಾಗಿ ಪರಿಣಮಿಸಿರುವ ಈ ಡೆಡ್ಲಿ ಆನ್‌ಲೈನ್ ಗೇಮ್/ ಬೆಟ್ಟಿಂಗ್ ಭೂತಕ್ಕೆ ಈ ಕೂಡಲೇ ಸಂಪೂರ್ಣ ಕಡಿವಾಣ ಹಾಕಿ ರಾಜ್ಯದ ವಿದ್ಯಾರ್ಥಿಗಳು ಹಾಗೂ ಯುವಜನತೆಯನ್ನು ಕಾಪಾಡಬೇಕೆಂಬುದರ ಕುರಿತು.

ಉತ್ತರ: ಆನ್‌ಲೈನ್ ಆಟಗಳ ಬೆಟ್ಟಿಂಗ್ ದಂಧೆಯಲ್ಲಿ ತೊಡಗಿಸಿಕೊಂಡವರ ವಿರುದ್ಧ ಪ್ರಕರಣಗಳನ್ನು ದಾಖಲಿಸಲಾಗುತ್ತಿರುತ್ತದೆ.

ಕಳೆದ ಮೂರು ವರ್ಷಗಳಲ್ಲಿ ಬೆಟ್ಟಿಂಗ್‌ನಲ್ಲಿ ಭಾಗವಹಿಸಿದವರ ವಿರುದ್ಧ ದಾಖಲಾದ ಪ್ರಕರಣಗಳ ಅಂಕಿ–ಅಂಶ ಕೆಳಗಿನಂತಿದೆ:–

| ಕ್ರಸ | ವರ್ಷ | ಆನ್ ಲೈನ್ ಆಟಗಳ ಬೆಟ್ಟಿಂಗ್ ದಂಧೆಯ ಸಂಬಂಧ ದಾಖಲಾದ ಪ್ರಕರಣಗಳ ಸಂಖ್ಯೆ |
|---|---|---|
| 1 | 2023 | 492 |
| 2 | 2024 | 382 |
| 3 | 2025 | 23 |
| | ಒಟ್ಟು | **897** |

ಕಳೆದ ಮೂರು ವರ್ಷಗಳಲ್ಲಿ ಆನ್‌ಲೈನ್ ಗೇಮ್‌ನಿಂದಾಗಿ ಆತ್ಮಹತ್ಯೆ ಮಾಡಿಕೊಂಡವರ ಸಂಖ್ಯೆ ಕೆಳಗಿನಂತಿದೆ:-

| ಕ್ರ.ಸಂ. | ವರ್ಷ | ಆನ್‌ಲೈನ್ ಆಟಗಳ ಬೆಟ್ಟಿಂಗ್‌ನಿಂದಾಗಿ ಆತ್ಮಹತ್ಯೆ ಮಾಡಿಕೊಂಡ ಪ್ರಕರಣಗಳ ಸಂಖ್ಯೆ |
|---|---|---|
| 1 | 2023 | 8 |
| 2 | 2024 | 6 |
| 3 | 2025 | 4 |
| | ಒಟ್ಟು | **18** |

ಯುವಕರು ಅನ್‌ಲೈನ್ ಬೆಟ್ಟಿಂಗ್ ಚಟುವಟಿಕೆಗಳಲ್ಲಿ ಭಾಗಿಯಾಗುವಂತೆ ಪ್ರಚೋದನೆ ಮಾಡುತ್ತಿರುವ ಅನ್‌ಲೈನ್ ಬೆಟ್ಟಿಂಗ್ App ಗಳಿಂದ ಪ್ರಚೋದನೆಗೆ ಒಳಪಟ್ಟು ಅಂತಹ ಬೆಟ್ಟಿಂಗ್ ಚಟುವಟಿಕೆಗಳಲ್ಲಿ ತೊಡಗಿಸಿಕೊಂಡಲ್ಲಿ ಉಂಟಾಗುವ ದುಷ್ಪರಿಣಾಮಗಳ ಬಗ್ಗೆ ಯುವಕರಲ್ಲಿ, ಶಾಲಾ-ಕಾಲೇಜು ವಿದ್ಯಾರ್ಥಿಗಳಲ್ಲಿ ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿರುತ್ತದೆ.

ಅಲ್ಲದೆ ಜಿಲ್ಲೆಯ ಹೊಟೇಲ್‌ಗಳಲ್ಲಿ, ಮಾಲ್‌ಗಳಲ್ಲಿ, ಶೋರೂಂ, ಶಾಪ್, ಕ್ಲಬ್ ಹಾಗೂ ಇನ್ನಿತರೆ ಮನೋರಂಜನಾ ಸ್ಥಳಗಳಲ್ಲಿ ಕೆಲಸ ಮಾಡುವ ಯುವಕರುಗಳು ಕ್ರಿಕೆಟ್, ಕಬ್ಬಡಿ ಇನ್ನಿತರೆ ಅನ್‌ಲೈನ್ ಆಟಗಳ ಬೆಟ್ಟಿಂಗ್ ದಂಧೆಯಲ್ಲಿ ತೊಡಗುತ್ತಿರುವ ಬಗ್ಗೆ ಆಗಿಂದಾಗ್ಗೆ ಅನಿರೀಕ್ಷಿತ ಭೇಟಿ ನೀಡಿ ಪರಿಶೀಲಿಸಲಾಗುತ್ತಿದೆ. ಯಾವುದೇ ಅಕ್ರಮ ಚಟುವಟಿಕೆಗಳು ಕಂಡು ಬಂದಲ್ಲಿ ಸೂಕ್ತ ಕಾನೂನು ಕ್ರಮ ಜರುಗಿಸಲಾಗುವುದು.

ಆನ್ ಲೈನ್ ಗೇಮ್ಸ್ ಆಮಿಷಕ್ಕೆ ಒಳಗಾಗದಂತೆ ಅರಿವು ಮೂಡಿಸುವ ಕುರಿತು ಶಾಲಾ ಕಾಲೇಜು ವಿದ್ಯಾರ್ಥಿಗಳಿಗೆ, ಯುವಕರಿಗೆ, ಯುವಕರ ಸಭೆ ಮೂಲಕ ಹಾಗೂ ಸಾರ್ವಜನಿಕರಿಗೆ ಜಾಗೃತಿ ಕಾರ್ಯಕ್ರಮ ಕೈಗೊಂಡಿದ್ದು ಮತ್ತು ಅಂತಹ ಆನ್‌ಲೈನ್ ಆಟಗಳ ಬೆಟ್ಟಿಂಗ್ ದಂಧೆಯಲ್ಲಿ ತೊಡಗಿಕೊಳ್ಳುವವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಲಾಗುತ್ತಿದೆ.

**ಆನ್‌ಲೈನ್ ಗೇಮ್ಸ್ ಮತ್ತು ಆನ್‌ಲೈನ್ ಜೂಜನ್ನು ತಡೆಗಟ್ಟಲು ಸರ್ಕಾರವು ಕೆಳಕಂಡಂತೆ ಕ್ರಮ ಕೈಗೊಂಡಿದೆ:-**

1. ಅನ್‌ಲೈನ್ ಗೇಮ್ಸ್ ಮತ್ತು ಆನ್‌ಲೈನ್ ಜೂಜಾಡುವ ಮಾಹಿತಿ ಸಂಗ್ರಹಿಸಿ ದಾಳಿಗಳನ್ನು ಕೈಗೊಂಡು ಪ್ರಕರಣಗಳನ್ನು ದಾಖಲಿಸಿ ಆರೋಪಿತರ ವಿರುದ್ಧ ನ್ಯಾಯಾಲಯಕ್ಕೆ ದೋಷಾರೋಪಣ ಪತ್ರ ಸಲ್ಲಿಸಲಾಗುತ್ತಿದೆ.

2. ಅಕ್ರಮ ಆನ್‌ಲೈನ್ ಜೂಜಾಟ/ ಗೇಮ್ಸ್ ಆಡುವವರು ಕಂಡು ಬಂದಲ್ಲಿ ಪೊಲೀಸ್ ಸಹಾಯವಾಣಿಗೆ ಕರೆ ಮಾಡಿ ಮಾಹಿತಿಯನ್ನು ತಿಳಿಸುವಂತೆ ತಿಳುವಳಿಕೆ ನೀಡಲಾಗಿದೆ.

3. ಸಾರ್ವಜನಿಕರಲ್ಲಿ ಬೆಟ್ಟಿಂಗ್ ದಂಧೆಯಲ್ಲಿ ಪಾಲ್ಗೊಳ್ಳಬಾರದೆಂದು ಜಾಗೃತಿ ಮೂಡಿಸಲಾಗಿರುತ್ತದೆ.

4. ಪೊಲೀಸ್ ಘಟಕ ವ್ಯಾಪ್ತಿಯ ಸರಹದ್ದು ಎಲ್ಲಾ ಪೊಲೀಸ್ ಠಾಣೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಎಲ್ಲಾ ಅಧಿಕಾರಿ ಸಿಬ್ಬಂದಿಗಳಿಗೆ ತಮ್ಮ ತಮ್ಮ ಠಾಣಾ ಬೀಟ್ ವ್ಯಾಪ್ತಿಯಲ್ಲಿ ಗುಪ್ತ ಮಾಹಿತಿಯನ್ನು ಸಂಗ್ರಹಿಸಿ ಯಾರಾದರು ಬೆಟ್ಟಿಂಗ್ ದಂಧೆ ನಡೆಸುವವರು ಇದ್ದಲ್ಲಿ ಮಾಹಿತಿಯನ್ನು ಮೇಲಾಧಿಕಾರಿಗಳ ಗಮನಕ್ಕೆ ತರಲು ಸೂಚಿಸಿರುತ್ತದೆ.

5. ಎಲ್ಲಾ ಪೊಲೀಸ್ ಠಾಣೆಗಳ ಠಾಣಾಧಿಕಾರಿಗಳಿಗೆ ಹಾಗೂ ಉಪ ವಿಭಾಗಾಧಿಕಾರಿಗಳಿಗೆ ಗುಪ್ತ ಮಾಹಿತಿ ಕರ್ತವ್ಯ ಮತ್ತು ಅಪರಾಧ ಕರ್ತವ್ಯ ನಿರ್ವಹಿಸುವ ಸಿಬ್ಬಂದಿಗಳಿಗೆ ಆನ್‌ಲೈನ್ ಬೆಟ್ಟಿಂಗ್ ದಂಧೆ ನಡೆಸುವವರ ನಿಖರವಾದ ಮಾಹಿತಿಯನ್ನು ಸಂಗ್ರಹಿಸಿ ದಾಳಿ ನಡೆಸಿ ಸೂಕ್ತ ಕಾನೂನು ಕ್ರಮ ಜರುಗಿಸಲು ಕ್ರಮ ಕೈಗೊಳ್ಳಲು ಸೂಚಿಸಲಾಗಿರುತ್ತದೆ.

ರಾಜ್ಯದ ಹಲವು ಜಿಲ್ಲೆಗಳಲ್ಲಿ ಚಾಲ್ತಿಯಲ್ಲಿರುವ ಆನ್‌ಲೈನ್ ಬೆಟ್ಟಿಂಗ್ ಅಪ್ಲಿಕೇಶನ್‌ಗಳ ಮಾಹಿತಿ ಹಾಗೂ ದಾಖಲಾದ ಪ್ರಕರಣಗಳ ಮಾಹಿತಿಯನ್ನು ಹಾಗೂ ಆನ್‌ಲೈನ್ ಗೇಮ್‌ಗಳನ್ನು ನಿರ್ಬಂಧಿಸುವ ಕುರಿತಂತೆ ಕರ್ನಾಟಕ ಪೊಲೀಸ್ ಕಾಯ್ದೆ, 1963ರ ಕಲಂ 78, 79, 80, 87, 114, 128ಎ ಹಾಗೂ 176 ಗಳಿಗೆ ಕೆಲವು ತಿದ್ದುಪಡಿ ಮಾಡಲು ತೀರ್ಮಾನಿಸಿ, The Karnataka Police (Amendment) Act, 2000 (Central Act 21 of 2000) ರಲ್ಲಿನ ತಾಂತ್ರಿಕ ಅಂಶಗಳನ್ನು ಸೇರ್ಪಡೆಗೊಳಿಸಲಾಗಿತ್ತು. ಈ ಸಂಬಂಧ ಆನ್‌ಲೈನ್ ಗೇಮ್ ಸಂಸ್ಥೆಗಳು ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು ಇಲ್ಲಿ W.P.No.18703/2021 (GM-Police) ದಾಖಲಿಸಲಾಗಿ, ಮಾನ್ಯ ಉಚ್ಚ ನ್ಯಾಯಾಲಯವು ಸರ್ಕಾರವು ತಿದ್ದುಪಡಿ ಮಾಡಲಾಗಿದ್ದ ಆದೇಶವನ್ನು ದಿನಾಂಕ:14.02.2022 ರಂದು ರದ್ದುಗೊಳಿಸಿರುತ್ತದೆ. ಮಾನ್ಯ ಉಚ್ಚ ನ್ಯಾಯಾಲಯದ ಆದೇಶವನ್ನು ಪ್ರಶ್ನಿಸಿ ಸರ್ಕಾರವು ಮಾನ್ಯ ಸರ್ವೋಚ್ಚ ನ್ಯಾಯಾಲಯದಲ್ಲಿ Civil Appeal No.6132/2023ನ್ನು ದಾಖಲಿಸಿದ್ದು, ಪ್ರಕರಣವು ಬಾಕಿಯಿರುತ್ತದೆ.

**ಸಂಖ್ಯೆ: 157 ಎಸ್‌ಎಸ್‌ಟಿ 2025**

**(ಡಾ: ಜಿ. ಪರಮೇಶ್ವರ)**
**ಗೃಹ ಸಚಿವರು**